ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಬುಧವಾರ, ದಿನಾಂಕ : 03 ನೇ ಫೆಬ್ರುವರಿ, 2021

ಬಹುಮಹಡಿ ವಸತಿ ಕಟ್ಟಡಗಳ ಮಾಲೀಕರ ಸಂಘದ ನೋಂದಣಿ ಕುರಿತು

ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು)

321 (318) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ 3 ವರ್ಷಗಳಲ್ಲಿ ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಎಷ್ಟು ಬಹುಮಹಡಿ ಕಟ್ಟಡಗಳ ಮಾಲೀಕರ ಸಂಘಗಳು ಉಪನೋಂದಣಾಧಿಕಾರಿ ಕಛೇರಿಯಲ್ಲಿ ನೊಂದಣಿಯಾಗಿವೆ; (ವಿಭಾಗವಾರು ಮಾಹಿತಿ ನೀಡುವುದು)

(ಆ) ಉಪನೋಂದಣಾಧಿಕಾರಿಗಳ ಕಛೇರಿಯಲ್ಲಿ ನೋಂದಣಿಯಾಗಿರುವ ಬಹುಮಹಡಿ ಕಟ್ಟಡಗಳ ಮಾಲೀಕರ ಸಂಘಗಳಿಗೆ ನೋಂದಣಿಯಾಗಿರುವ ಕುರಿತು ಪ್ರಮಾಣ ಪತ್ರ ನೀಡಲಾಗುತ್ತಿದೆಯೆ; ಇಲ್ಲವಾದಲ್ಲಿ, ನೋಂದಣಿಯಾದ ಕುರಿತು ಪ್ರಮಾಣ ಪತ್ರ ನೀಡದಿರಲು ಕಾರಣಗಳೇನು;

(ಇ) ಬಹುಮಹಡಿ ಕಟ್ಟಡಗಳ ಮಾಲೀಕರ ಸಂಘಗಳು ಉಪನೋಂದಣಾಧಿಕಾರಿಯವರ ಕಛೇರಿಯಲ್ಲಿ ನೋಂದಣಿಯಾಗಿರುವ ಕುರಿತು ಪ್ರಮಾಣ ಪತ್ರ ನೀಡದೇ ಇರುವುದರಿಂದ ಅಂತಹ ಸಂಘಗಳಿಗೆ ತೆರಿಗೆಗಾಗಿ ಪಾನ್ ಕಾರ್ಡ್ ಪಡೆಯಲು ಹಾಗೂ ಬ್ಯಾಂಕಿನಲ್ಲಿ ಸಂಘದ ಹೆಸರಿನಲ್ಲಿ ಖಾತೆ ತೆರೆಯಲು ತೊಂದರೆಗಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಕುರಿತು ಸರ್ಕಾರದ ನಿಲುವೇನು;

(ಈ) ಬಹುಮಹಡಿ ಕಟ್ಟಡಗಳ ಮಾಲೀಕರ ಸಂಘಗಳು ಉಪನೋಂದಣಾಧಿಕಾರಿಯವರ ಕಛೇರಿಯಲ್ಲಿ ನೋಂದಣಿಯಾಗಿರುವ ಕುರಿತು ಪ್ರಮಾಣ ಪತ್ರವನ್ನು ಎಂದಿನಿಂದ ನೀಡಲಾಗುವುದು; ಈ ಕುರಿತು ಸರ್ಕಾರ ಯಾವ ಕ್ರಮ ಕೈಗೊಂಡಿದೆ?